ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಬಗರ್ ಹುಕುಂ ಯೋಜನೆಯ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-

324 (403) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಬಗರ್ ಹುಕುಂ ಯೋಜನೆಯಡಿಯಲ್ಲಿ ಇದುವರೆಗೂ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಯೋಜನೆಯಡಿಯಲ್ಲಿ ಇಲ್ಲಿಯವರೆಗೂ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಹಾಗೂ ಈ ಫಲಾನುಭವಿಗಳಿಗೆ ಒಟ್ಟು ಎಷ್ಟು ಜಮೀನು ನೀಡಲಾಗಿದೆ ;

(ಇ) ಸದರಿ ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು ; ಹಾಗೂ ಗರಿಷ್ಟ ಎಷ್ಟು ಪ್ರಮಾಣದ ಜಮೀನನ್ನು ನೀಡಲಾಗುವುದು ;

(ಈ) ಬಾಗಲಕೋಟೆ ಜಿಲ್ಲೆಯ ವ್ಯಾಪ್ತಿಯಲ್ಲಿ ಇಲ್ಲಿಯವರೆಗೂ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ; ವಿಲೇವಾರಿ ಮಾಡಿದ ಮತ್ತು ಮಾಡದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಸದರಿ ಯೋಜನೆಯಲ್ಲಿ ಅರ್ಜಿ ಸಲ್ಲಿಸುವ ಕಾಲಾವಧಿಯನ್ನು ವಿಸ್ತರಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂದವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ?